**CC 9918/2025**
**PW.1**

## ಅಪರ ಸಿವಿಲ್  ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ದೊಡ್ಡಬಳ್ಳಾಪುರ

## ಸಿ ಸಿ ನಂ :9918/2025

**ಪಿ ಡಬ್ಲೂ - 1**

**ಸಿ ಡಬ್ಲೂ - 1**

**ದಿಃ 17.03.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಹೆಸರು ಃ ಉಮೇಶ್**

**ತಂದೆಯ ಹೆಸರು ಃ ರಾಜು**

**ವಯಸ್ಸು ಃ 35 ವರ್ಷ**

**ಉದ್ಯೋಗ ಃ ಖಾಸಗಿ ಉದ್ಯೋಗಿ**

**ವಿಳಾಸ ಃ ಬೊಮ್ಮನಹಳ್ಳಿ ಗ್ರಾಮ**

**ಮುಖ್ಯ ವಿಚಾರಣೆ ಃ ಸ ಸ ಅ ರವರಿಂದ**

ಆರೋಪಿತರು ನನಗೆ ಪರಿಚಿತರು. ಚಾಸಾ-2, 5 ಮತ್ತು 6 ರವರು ನನಗೆ ಪರಿಚಿತರು. ಸಾಕ್ಷಿಯು ದೂರಿನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ದೂರನ್ನು ನಿಪಿ-1 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. 1 ನೇ ಆರೋಪಿ ಮತ್ತು ನನ್ನ ನಡುವೆ ವೈಯಕ್ತಿಕ ವಿಚಾರವಾಗಿ ಮಾತಿನ ಚಕಮಕಿಯಾಗಿದ್ದು ಆಗ 2 ಮತ್ತು 3 ನೇ ಆರೋಪಿತರು ಇದ್ದರು, ಆ ನಂತರ ನಾನು ಸಿಟ್ಟಾಗಿ ಪೊಲೀಸ್ ಠಾಣೆಗೆ ಹೋದಾಗ ಪೊಲೀಸರು ನಿಪಿ-1 ಕ್ಕೆ ನನ್ನ ಸಹಿಯನ್ನು ಪಡೆದಿರುತ್ತಾರೆ. ನಿಪಿ-1 ರಲ್ಲಿನ ವಿಚಾರ ಗೊತ್ತಿಲ್ಲ. ಆರೋಪಿತರು ನನಗೆ ಅಡ್ಡಗಟ್ಟಿ ಅವಾಚ್ಯ ಶಬ್ಧಗಳಿಂದ ಬೈದಿರುವುದಿಲ್ಲ ಹಾಗೂ ಕೈಗಳಿಂದ ಹೊಡೆದಿಲ್ಲ  ಹಾಗೂ ಪ್ರಾಣ ಬೆದರಿಕೆ ಹಾಕಿಲ್ಲ. ನಾನು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿಲ್ಲ.
**(ಈ ಹಂತದಲ್ಲಿ ಸ ಸ ಅ ರವರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದರಿಂದ ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಸ ಸ ಅ ರವರಿಂದಃ**

ದಿಃ 01.11.2025 ರಂದು ನಾನು ರಾತ್ರಿ 7-30 ಗಂಟೆ ಸಮಯದಲ್ಲಿ ನಾನು ನನ್ನ ಮನೆಗೆ ನಡೆದುಕೊಂಡು ಹೋಗುತ್ತಿದ್ದಾಗ 1 ರಿಂದ 3 ನೇ ಆರೋಪಿತರು ನನ್ನನ್ನು ಅಡ್ಡಗಟ್ಟಿ ಗಲಾಟೆ ಮಾಡಿದರು ಎಂದರೆ ಸರಿಯಲ್ಲ. ನಂತರ ಆರೋಪಿತರು ನನ್ನನ್ನು ಕೆಳಕ್ಕೆ ಹಾಕಿಕೊಂಡು ಕೈಗಳಿಂದ ಮೈಕೈಗೆ ಹೊಡೆದು ನೋವುಂಟು ಮಾಡಿದರು ಎಂದರೆ ಸರಿಯಲ್ಲ. 1 ನೇ

**CC 9918/2025**
**PW.1**

ಆರೋಪಿಯು ನನ್ನನ್ನು ಅವಾಚ್ಯಶಬ್ಧಗಳಿಂದ ಬೈದು ಜೀವ ಸಹಿತ ಬಿಡುವುದಿಲ್ಲ ಎಂದು ಪ್ರಾಣ ಬೆದರಿಕೆ ಹಾಕಿದ ಎಂದರೆ ಸರಿಯಲ್ಲ. 1 ನೇ ಆರೋಪಿಯು ನನಗೆ ನಿನ್ನ ಹೆಂಡತಿಯನ್ನು ಬಾಳಿಸಲಿಲ್ಲ ಎಂದು ಹೀಯಾಳಿಸಿ ಮಾತನಾಡುತ್ತಿದ್ದರಿಂದ ನಾನು ಮನನೊಂದು ದಿಃ 02.11.2025 ರಂದು ಬೆಳಿಗ್ಗೆ 11-00 ಗಂಟೆಗೆ ನಮ್ಮ ಮನೆಯ ಬಳಿ ನಾನೇ ವಿಷವನ್ನು ಸೇವನೆ ಮಾಡಿದ್ದರಿಂದ ನನಗೆ ಸಾಮಾನ್ಯ ಸ್ವರೂಪದ ಗಾಯವುಂಟಾಗಿತ್ತು ಎಂದರೆ ಸರಿಯಲ್ಲ. ನಾನು ಯಾವುದೇ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿಲ್ಲ. ಆ ನಂತರ ನಾನೇ ದಿಃ 03.11.2025 ರಂದು ನಿಪಿ-1 ರಂತೆ ದೂರನ್ನು ದಾಖಲಿಸಿದ್ದೆ ಎಂದರೆ ಸರಿಯಲ್ಲ. ನಿಪಿ-1 ರಲ್ಲಿನ ವಿಚಾರ ಗೊತ್ತಿದ್ದರು ನಾನು ಸುಳ್ಳು ನುಡಿಯುತ್ತಿದ್ದೇನೆಂದರೆ ಸಾಕ್ಷಿಯು ನಾವು ಈಗ ರಾಜಿಯಾಗಿದ್ದೇವೆಂದು ನುಡಿಯುತ್ತಾರೆ. ರಾಜಿಯಾದ ಕಾರಣ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ನುಡಿಯುತ್ತಿದ್ದೇನೆಂದರೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಇಲ್ಲ ಎಂದು ನುಡಿದಿರುತ್ತಾರೆ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನ ರೀತ್ಯಾ ಬೆರಳಚ್ಚುಗಾರರಿಂದ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲಾಯಿತು)**

**ಓ ಹೇ ಕೇ ಸ ಅದೆ**

**ಅಪರ ಸಿವಿಲ್ ನ್ಯಾ. ಮತ್ತು**
**ಜೆ.ಎಂ.ಎಫ್.ಸಿ, ದೊಡ್ಡಬಳ್ಳಾಪುರ**